# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಗ್ರಾಮ ಪಂಚಾಯಿತಿಯ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಗ್ರಂಥಾಲಯ ಮೇಲ್ವಿಚಾರಕರ ಗೌರವಧನವನ್ನು ಆನ್‌ಲೈನ್‌ನಲ್ಲಿ ಪಾವತಿಸಲು ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲಾಗಿರುವ HRMS Module ಮೂಲಕ ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**- ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಪಿ.ಆರ್.62 ಜಿ.ಪಿ.ಎಸ್.2020, ಬೆಂಗಳೂರು, ದಿನಾಂಕ:27.08.2021.

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಆದೇಶದಂತೆ ಗ್ರಾಮ ಪಂಚಾಯಿತಿಯ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಗ್ರಂಥಾಲಯ ಮೇಲ್ವಿಚಾರಕರ ಗೌರವಧನ ಪಾವತಿಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅನುದಾನವನ್ನು ಗ್ರಾಮ ಪಂಚಾಯತಿಗಳ ಶಾಸನಬದ್ಧ ಅನುದಾನದ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲಾಗುತ್ತಿದೆ. ತದನಂತರ ಗ್ರಾಮ ಪಂಚಾಯಿತಿಗಳಿಂದ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಪ್ರತಿ ಮಾಹೆ ಚೆಕ್/ಡಿ.ಡಿ/NEFT/RTGS ಮೂಲಕ ಗೌರವಧನ ಪಾವತಿಸಲಾಗುತ್ತಿದೆ.

ಗ್ರಾಮ ಪಂಚಾಯಿತಿಯ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಗೌರವಧನ ಪಾವತಿಸುವ ಪ್ರಕ್ರಿಯೆಯಲ್ಲಿ ಸುಧಾರಣೆ ತರುವ ಉದ್ದೇಶದಿಂದ, ಪಂಚತಂತ್ರ 2.0 ತಂತ್ರಾಂಶದ HRMS ಮಾಡ್ಯುಲ್‌ನಲ್ಲಿ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಆನ್‌ಲೈನ್ ಮೂಲಕ ಗೌರವಧನವನ್ನು ಪಾವತಿಸಲು ಗ್ರಾಮ ಪಂಚಾಯತಿಗಳಿಗೆ ಅನುವು ಮಾಡಿಕೊಡಲಾಗಿದೆ. ಅದರಂತೆ, ಗ್ರಂಥಾಲಯ ಮೇಲ್ವಿಚಾರಕರುಗಳ ಗೌರವಧನ ಪಂಚತಂತ್ರ 2.0 ತಂತ್ರಾಂಶದ HRMS ಮಾಡ್ಯುಲ್ ನ ಮೂಲಕವೇ ಪಾವತಿಸಬೇಕಾಗಿರುವುದರಿಂದ ಈ ಕೆಳಕಂಡ ಆದೇಶ:

## ಸರ್ಕಾರದ ಆದೇಶ ಸಂಖ್ಯೆ: ಕಪಂರಾಇ/ಅಭಿವೃದ್ಧಿ/ಗ್ರಂಥಾಲಯ/155/ ಬೆಂಗಳೂರು, ದಿನಾಂಕ:24.04.2023.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಗ್ರಾಮ ಪಂಚಾಯಿತಿಗಳು ಗ್ರಾಮ ಪಂಚಾಯಿತಿಯ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಗೌರವಧನವನ್ನು ಪಂಚತಂತ್ರ 2.0 ತಂತ್ರಾಂಶದ HRMS ಮಾಡ್ಯುಲ್‌ನ ಮೂಲಕವೇ ಪಾವತಿಸಲು ಈ ಕೆಳಕಂಡಂತೆ ಆದೇಶಿಸಿದೆ.

1) ಪಂಚತಂತ್ರ 2.0 ತಂತ್ರಾಂಶದ "HRMS" ಮಾಡ್ಯುಲ್ ನಲ್ಲಿ ಗ್ರಂಥಾಲಯ ಮೇಲ್ವಿಚಾರಕರುಗಳ ಸೇವಾ ವಿವರಗಳನ್ನು ಹಾಗೂ ಬ್ಯಾಂಕ್ ಖಾತೆ ವಿವರಗಳನ್ನು ಅಳವಡಿಸಿ, e-KYC ಮೂಲಕ ಆಧಾರ್ ನೋಂದಣಿ ಮತ್ತು ಬಯೋಮೆಟ್ರಿಕ್ ನೋಂದಣಿ ಮಾಡಿಸುವುದು. ಇವರ ವಿವರಗಳನ್ನು HRMS" ಮಾಡ್ಯುಲ್ ನಲ್ಲಿ ಪ್ರತ್ಯೇಕವಾಗಿ ಸೇರಿಸುವುದು.

2) ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರುಗಳನ್ನು "Employee Id ಯಿಂದ ಗುರುತಿಸಲಾಗುವುದು.

3) ಹೀಗೆ, ಪಂಚತಂತ್ರ 2.0 ತಂತ್ರಾಂಶದ "HRMS" ಮಾಡ್ಯುಲ್‌ನಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಗ್ರಂಥಾಲಯ ಮೇಲ್ವಿಚಾರಕರುಗಳ ವಿವರಗಳನ್ನು ಅಳವಡಿಸಿ ಸಂಬಂಧಪಟ್ಟ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಅನುಮೋದನೆಗೆ ಸಲ್ಲಿಸಿ, ಅನುಮೋದನೆ ಪಡೆಯುವುದು.

4) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಮಾರ್ಚ್-2023 ಮಾಹೆವರೆಗಿನ ಗೌರವಧನವನ್ನು ಗ್ರಾಮ ಪಂಚಾಯಿತಿಗಳ ಶಾಸನಬದ್ಧ ಬ್ಯಾಂಕ್ ಖಾತೆಯಿಂದ ಪಂಚತಂತ್ರ ತಂತ್ರಾಂಶದ ಇ.ಎಫ್.ಎಂ.ಎಸ್ (eFMS) ಮಾಡ್ಯುಲ್ ಮೂಲಕವೇ ಪಾವತಿಸುವುದು.

5) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಯ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಮಾರ್ಚ್-2023 ಮಾಹೆಯಿಂದ ಗೌರವಧನವನ್ನು ಪಂಚತಂತ್ರ 2.0 ತಂತ್ರಾಂಶದ "HRMS" ಮಾಡ್ಯುಲ್ ನ ಇ.ಎಫ್.ಎಂ.ಎಸ್ (eFMS) ಮಾಡ್ಯುಲ್ ಮೂಲಕವೇ ಪಾವತಿಸುವುದನ್ನು ಕಡ್ಡಾಯಗೊಳಿಸಿದೆ. **ಗ್ರಾಮ ಪಂಚಾಯತಿಗಳ ಗ್ರಂಥಾಲಯ ಮೇಲ್ವಿಚಾರಕರಿಗೆ ನಗದು/ಚೆಕ್/ಡಿಡಿ/NEFT/RTGS ಮೂಲಕ ಗೌರವಧನ ಪಾವತಿಸುವುದನ್ನು ನಿಷೇಧಿಸಲಾಗಿದೆ.**

6) ಪಂಚತಂತ್ರ 2.0 ತಂತ್ರಾಂಶದ "HRMS" ಮಾಡ್ಯುಲ್ ನ ಇ.ಎಫ್.ಎಂ.ಎಸ್ (eFMS) ಮಾಡ್ಯುಲ್ ನಲ್ಲಿ ಗ್ರಾಮ ಪಂಚಾಯತಿಯ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಗೌರವಧನ ಪಾವತಿಗಾಗಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಪ್ರತ್ಯೇಕವಾಗಿ ಬಿಲ್ಲುಗಳನ್ನು ತಯಾರಿಸಿ, ಡಿಜಿಟಲ್ ಸಹಿಯ ಮೂಲಕ ಅನುಮೋದಿಸುವುದು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಡಿಜಿಟಲ್ ಸಹಿಯ ಮೂಲಕ ಕಳುಹಿಸಲಾದ ಬಿಲ್ಲುಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿ ಅಧ್ಯಕ್ಷರು 3 ದಿನಗೊಳಗಾಗಿ ಡಿಜಿಟಲ್ ಸಹಿಯ ಮೂಲಕ ಅನುಮೋದಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 24/04/23.
(ನವೀನ್ ಕುಮಾರ್. ಬಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಕೊರಡಿಎದ 8 28/4 ದಿನಾಂಕ
ಗ್ರಾಮೀಣಾಭಿವೃದ್ಧಿ ಮತ್ತು ಪಂ ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು,ಕರ್ನಾಟಕ ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ\
3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
4. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಯ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
5. ಗ್ರಾಮ ಪಂಚಾಯಿತಿಯ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ(ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
5. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
6. ಕಛೇರಿ ಪ್ರತಿ.

O/C